# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | : | 61(109) |
| ಸದಸ್ಯರ ಹೆಸರು | : | ಶ್ರೀ ನಿರಾಣಿ ಹಣಮಂತ ರುದ್ರಪ್ಪ (ಪದವೀಧರ ಕ್ಷೇತ್ರ), |
| ಉತ್ತರಿಸುವ ದಿನಾಂಕ | : | 19/12/2022. |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಸಕಾಲ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಅನುದಾನಿತ ಶಾಲಾ ಕಾಲೇಜುಗಳ ನೌಕರರಿಗೆ ಜ್ಯೋತಿ ಸಂಜೀವಿನಿ ಆರೋಗ್ಯ ಸೌಲಭ್ಯವನ್ನು ಪ್ರಸ್ತುತ ನೀಡಲಾಗುತ್ತಿದೆಯೇ; | ಇಲ್ಲ. |
| ಆ) | ಅನುದಾನಿತ ಶಾಲಾ ಕಾಲೇಜುಗಳ ನೌಕರರಿಗೆ ಜ್ಯೋತಿ ಸಂಜೀವಿನಿ ಆರೋಗ್ಯ ಸೌಲಭ್ಯವನ್ನು ನೀಡದಿರಲು ಕಾರಣಗಳೇನು; | ಅನುದಾನಿತ ಶಾಲಾ ಕಾಲೇಜುಗಳ ನೌಕರರು ಕರ್ನಾಟಕ ಶಿಕ್ಷಣ ಅಧಿನಿಯಮ-1983 ಮತ್ತು ಅದರಡಿ ರಚಿಸಲ್ಪಟ್ಟ ಕರ್ನಾಟಕ ಶಿಕ್ಷಣ ಸಂಸ್ಥೆಗಳ (Classification, Regulation and Prescrition of Curricula) ನಿಯಮಗಳು-1995ರ ವ್ಯಾಪ್ತಿಗೆ ಒಳಪಡುತ್ತಾರೆ. ಇವರನ್ನು ಸರ್ಕಾರಿ ನೌಕರರೆಂದು ಪರಿಗಣಿಸಲಾಗುವುದಿಲ್ಲ.<br>ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳು ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು-1963ರ ವ್ಯಾಪ್ತಿಗೆ ಒಳಪಡುವುದಿಲ್ಲ ಹಾಗೂ ಕರ್ನಾಟಕ ಶಿಕ್ಷಣ ಸಂಸ್ಥೆಗಳು(ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ ಮತ್ತು ಸೇವಾ ಷರತ್ತು ಹಾಗೂ ನಿಬಂಧನೆಗಳು) ನಿಯಮಗಳು 1999ರ ಅನುಬಂಧ -ii (3) ರನ್ವಯ ವೈದ್ಯಕೀಯ ವೆಚ್ಚ ಮರುಪಾವತಿ ಸೌಲಭ್ಯ ನೀಡಲು ಅವಕಾಶವಿರುವುದಿಲ್ಲ. ಆದುದರಿಂದ ಅನುದಾನಿತ ಸಿಬ್ಬಂದಿಗಳು ಜ್ಯೋತಿ ಸಂಜೀವಿನಿ ಯೋಜನೆಯ ವ್ಯಾಪ್ತಿಗೆ ಬರುವುದಿಲ್ಲ. |
| ಇ) | ಅನುದಾನಿತ ಶಾಲಾ ಕಾಲೇಜುಗಳ ಶಿಕ್ಷಕರು ಮತ್ತು ನೌಕರರಿಗೂ ಸರ್ಕಾರಿ ಶಾಲಾ ಕಾಲೇಜುಗಳ ನೌಕರರಿಗೆ ನೀಡುತ್ತಿರುವ ಮಾದರಿಯಲ್ಲಿಯೇ ಜ್ಯೋತಿ ಸಂಜೀವಿನಿ ಆರೋಗ್ಯ ಸೌಲಭ್ಯವನ್ನು ಅನುದಾನಿತ ಶಾಲಾ ಕಾಲೇಜುಗಳ ನೌಕರರಿಗೆ ನೀಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; (ಸಂಪೂರ್ಣ ಮಾಹಿತಿ ನೀಡುವುದು) | |
| ಈ) | ನೆರೆಯ ರಾಜ್ಯಗಳಲ್ಲಿ ಅನುದಾನಿತ ಶಾಲಾ ಕಾಲೇಜುಗಳ ಶಿಕ್ಷಕರು ಮತ್ತು ನೌಕರರಿಗೆ ತಾರತಮ್ಯ ಮಾಡದೇ ಆರೋಗ್ಯ ಸೌಲಭ್ಯ ನೀಡುತ್ತಿದ್ದು ನಮ್ಮ ರಾಜ್ಯದಲ್ಲಿ ನೀಡಲು ಸರ್ಕಾರ ಕ್ರಮವಹಿಸುವುದೇ? | |
| ಉ) | ಉದ್ದೇಶಿಸಿದಲ್ಲಿ, ಯಾವ ವರ್ಷದವರೆಗೆ ಅನುದಾನ ನೀಡುವುದನ್ನು ನಿರೀಕ್ಷಿಸಬಹುದಾಗಿದೆ; ಈ ಕುರಿತು ಸರ್ಕಾರದ ನಿಲುವೇನು? (ಮಾಹಿತಿ ನೀಡುವುದು) | |

ಸಂಖ್ಯೆ: ಇಪಿ 612 ಎಸ್ಇಎಸ್ 2022

(ಬಿ.ಸಿ.ನಾಗೇಶ್)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ
ಹಾಗೂ ಸಕಾಲ ಸಚಿವರು